Nagaraj J. Pujar. 04/08/2021
2:30 to 5:30
Hemanth sir

9-SEP-DL
13-MCF
19-Airavata
41-Samruddi
45-Unnati
53-Swayamp udyoga bank linked.

ಕರ್ನಾಟಕ ಸರ್ಕಾರ

ಸಂಖ್ಯೆ: ಸಕಇ 148 ಸ್ಪೀಮರ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:30.06.2018.

## ಸುತ್ತೋಲೆ

ವಿಷಯ: ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 162 ಎಸ್‌ಡಿಸಿ 2015, ದಿನಾಂಕ: 09.09.2015.
2. ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ನಿಯಮಗಳು – 2017.
3. ಲೋಕಾಯುಕ್ತರ ಆದೇಶ ಸಂಖ್ಯೆ: ಸಿ.ಓ.ಎಂ.ಪಿ.ಟಿ./ಎಲ್‌.ಒ.ಕೆ./ಬಿಸಿಡಿ/2724/2016, ದಿನಾಂಕ:30.08.2017.

******

ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಫಲಾಪೇಕ್ಷಿಗಳನ್ನು ಆಯ್ಕೆ ಮಾಡುವಲ್ಲಿ ಅರ್ಹ ಅಭ್ಯರ್ಥಿಗಳಿಗೆ ಯೋಜನೆಗಳ ಪ್ರಯೋಜನ ಸಿಗುತ್ತಿಲ್ಲವೆಂದು ಮತ್ತು ಅನರ್ಹರನ್ನು ಕೂಡ ಆಯ್ಕೆ ಮಾಡಲಾಗುತ್ತಿದೆ ಎಂದು ಮಾನ್ಯ ಲೋಕಾಯುಕ್ತಕ್ಕೆ ದೂರುಗಳು ಬಂದಿರುವುದರಿಂದ ಮಾನ್ಯ ಲೋಕಾಯುಕ್ತರು ತಮ್ಮ ಆದೇಶ ಉಲ್ಲೇಖ (3)ರಲ್ಲಿ ಫಲಾಪೇಕ್ಷಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡ ಮಾರ್ಗದರ್ಶನಗಳನ್ನು ನೀಡಿರುತ್ತಾರೆ:

1. ಅರ್ಜಿಗಳನ್ನು ಆಹ್ವಾನಿಸುವಾಗ ದಿನಾಂಕ ನಿಗದಿಪಡಿಸಿ ಸದರಿ ದಿನಾಂಕದ ಒಳಗೆ ಬಂದ ಅರ್ಜಿಗಳನ್ನು ಮಾತ್ರ ಪರಿಗಣಿಸತಕ್ಕದ್ದು. ನಿಗದಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಬಾರದು ಮತ್ತು ಅವುಗಳನ್ನು ತಿರಸ್ಕರಿಸುವುದು.
2. ಬಂದಿರುವ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ತಾಲ್ಲೂಕು ಮಟ್ಟದ ಆಯ್ಕೆ ಸಮಿತಿ ಮುಂದೆ ಸಲ್ಲಿಸುವುದು. ಮತ್ತು ಅರ್ಹರಾಗಿದ್ದಲ್ಲಿ ಮಾತ್ರ ಆಯ್ಕೆ ಮಾಡುವುದು.
3. ಅರ್ಜಿದಾರರು ಒಂದು ಬಾರಿಗಿಂತ ಹೆಚ್ಚಾಗಿ ಎರಡು, ಮೂರು ಬಾರಿ ಅರ್ಜಿ ಸಲ್ಲಿಸಿದವರಿಗೆ ಅವರಿಗೆ ಮೊದಲನೇ ಆದ್ಯತೆ ನೀಡಿ ಆಯ್ಕೆ ಮಾಡುವುದು.
4. ಅರ್ಹ ಅಭ್ಯರ್ಥಿಗಳು ಹೆಚ್ಚಿಗೆ ಇದ್ದಲ್ಲಿ ಕಾಯ್ದಿರಿಸಿದ ಪಟ್ಟಿಯಲ್ಲಿ ಸೇರಿಸಿ, ಮುಂದಿನ ಆಯ್ಕೆಯಲ್ಲಿ ಆದ್ಯತೆ ನೀಡುವುದು.
5. ವಿಧಾನಸಭಾ ಕ್ಷೇತ್ರಕ್ಕೆ ನೀಡಿದ ಗುರಿಯನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿವಿಧ ಜಾತಿಗಳ ಜನಸಂಖ್ಯೆಯ ಆಧಾರದ ಮೇಲೆ ಆಯ್ಕೆ ಮಾಡುವುದು ಅಂದರೆ ಬಡವರಲ್ಲಿ ಅತಿ ಬಡವರನ್ನು ಆಯ್ಕೆ ಮಾಡುವುದು.
6. ಆಯ್ಕೆ ಸಮಿತಿಯ ಆಯ್ಕೆ ಸಮಿತಿ ಸಭೆಯ ನಡವಳಿಗಳನ್ನು ವಿಡಿಯೋಗ್ರಾಫ್ ಮಾಡುವುದು.
7. ತಾಲ್ಲೂಕು ಮಟ್ಟದ ಸಮಿತಿ ಆಯ್ಕೆ ಪ್ರಕ್ರಿಯೆಯನ್ನು ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳ ಒಳಗೆ ಪೂರ್ಣಗೊಳಿಸುವುದು. ಒಂದು ವೇಳೆ ಪೂರ್ಣಗೊಳಿಸದೇ ಇದ್ದಲ್ಲಿ ಅವುಗಳನ್ನು ಜಿಲ್ಲಾಧಿಕಾರಿಗಳು ಅಕ್ಟೋಬರ್ ತಿಂಗಳೊಳಗೆ ಆಯ್ಕೆ ಮಾಡುವುದು.
8. ಸದರಿ ಸಮಿತಿಯ ನಡವಳಿಯನ್ನು ಪಾರದರ್ಶಕವಾಗಿ ಯಾವುದೇ ಲೋಪ-ದೋಷಗಳು ಇಲ್ಲದೆ ಹೊರಡಿಸಬೇಕು. ಅದರಲ್ಲಿ ಲೋಪ-ದೋಷಗಳು ಇದ್ದಲ್ಲಿ ಸದರಿ ಸಮಿತಿಯ ಕಾರ್ಯದರ್ಶಿಗಳು ಹೊಣೆಗಾರರಾಗಿರುತ್ತಾರೆ.

9. [illegible] ಪಟ್ಟಿಗಳನ್ನು [illegible] ಕೇಂದ್ರ ಕಛೇರಿ [illegible] ಪಟ್ಟಿಯನ್ನು [illegible] ಸದರಿ ಸಮಿತಿ. ಸೂಕ್ತ ಕಾರಣಗಳನ್ನು ನೀಡಿ ಬದಲಿಸಬಹುದು.
10. ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಗ್ರಾಮಪಂಚಾಯ ಕಚೇರಿಯ ನೋಟೀಸು ಬೋರ್ಡಿನಲ್ಲಿ ಮರುದಿನ ಪ್ರದರ್ಶಿಸುವುದು.
11. ವಿವೇಚನಾ ಕೋಟಾದಲ್ಲಿ ಸಹ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಮತ್ತು ಇತರೆ ಅಧಿಕಾರಿಗಳನ್ನು ಸೇರಿಸಿಕೊಂಡು ಫಲಾನುಭವಿಗಳನ್ನು ಆಯ್ಕೆ ಮಾಡುವುದು.
12. ಸದರಿ ಸಮಿತಿ ಅರ್ಜಿದಾರರ ದೂರುಗಳನ್ನು ಸಹ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದು. ಸದರಿ ಸಮಿತಿ ಸಹ ಕೊನೆ ದಿನಾಂಕವನ್ನು ನಿಗದಿಪಡಿಸಿ ಅರ್ಜಿಗಳನ್ನು ಆಹ್ವಾನಿಸಿ ಆಯ್ಕೆ ಮಾಡುವುದು.

ಮುಂದುವರೆದು ಉಲ್ಲೇಖ (2)ರ ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ನಿಯಮಗಳು-2017 ನಿಯಮ-9(3) ಇದರಲ್ಲಿ ಸಹ ಫಲಾಪೇಕ್ಷಿಗಳನ್ನು ಗುರುತಿಸಿ ಆಯ್ಕೆ ಮಾಡುವ ಬಗ್ಗೆ ವಿವರಿಸಲಾಗಿದೆ.

ಮಾನ್ಯ ಲೋಕಾಯುಕ್ತರು ನೀಡಿದ ಮಾರ್ಗದರ್ಶನಗಳಂತೆ ಮತ್ತು ಮೇಲ್ಕಂಡ ನಿಯಮಗಳ ಪ್ರಕಾರ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳು ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಿಗೆ ಫಲಾಪೇಕ್ಷಿಗಳನ್ನು ಆಯ್ಕೆ ಮಾಡುವಾಗ ಈ ಕೆಳಕಂಡ ನಿರ್ದೇಶನಗಳನ್ನು ಅನುಸರಿಸಲು ಈ ಮೂಲಕ ಸೂಚಿಸಲಾಗಿದೆ;

1. ಸದರಿ ನಿಗಮಗಳು ಅರ್ಜಿಗಳನ್ನು ಆಹ್ವಾನಿಸುವಾಗ ಕೊನೆ ದಿನಾಂಕ ನಿಗದಿಪಡಿಸಿ ಮತ್ತು ಸದರಿ ದಿನಾಂಕದ ಒಳಗೆ ಬಂದ ಅರ್ಜಿಗಳನ್ನು ಮಾತ್ರ ಪರಿಗಣಿಸತಕ್ಕದ್ದು. ನಿಗದಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಬಾರದು.
2. ಬಂದಿರುವ ಅರ್ಜಿಗಳನ್ನು ವಿವಿಧ ಯೋಜನೆಗಳ ಮಾರ್ಗಸೂಚಿ/ನಿಯಮಗಳಂತೆ ಪರಿಶೀಲಿಸಿ ಅರ್ಹ ಫಲಾಪೇಕ್ಷಿಗಳ ಪಟ್ಟಿಯನ್ನು ತಯಾರಿಸಿ ನಿಗಮದ/ಸಮಾಜ ಕಲ್ಯಾಣ ಇಲಾಖೆಯ/ತಾಲ್ಲೂಕು ಕಛೇರಿಯಲ್ಲಿ ಮತ್ತು ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಲ್ಲಿ ನೋಟೀಸು ಬೋರ್ಡಿನಲ್ಲಿ ಪ್ರದರ್ಶಿಸುವುದು. ನಂತರ ಸದರಿ ಪಟ್ಟಿಯನ್ನು ತಾಲ್ಲೂಕು ಮಟ್ಟದ ಆಯ್ಕೆ ಸಮಿತಿ ಮುಂದೆ ಸಲ್ಲಿಸುವುದು.
3. ಅರ್ಹ ಅಭ್ಯರ್ಥಿಗಳು ನಿಗದಿಪಡಿಸಿದ ಗುರಿಗಳಿಗಿಂತ ಹೆಚ್ಚಿಗೆ ಇದ್ದಲ್ಲಿ ಕಾಯ್ದಿರಿಸಿದ ಪಟ್ಟಿಯನ್ನು ತಯಾರಿಸಿ ಮುಂದಿನ ವರ್ಷದ ಆಯ್ಕೆಯಲ್ಲಿ ಅವರಿಗೆ ಆದ್ಯತೆ ನೀಡುವುದು. ಕಾಯ್ದಿರಿಸಿದ ಪಟ್ಟಿಯಲ್ಲಿರುವ ಅರ್ಹ ಅಭ್ಯರ್ಥಿಗಳು ಮತ್ತೊಮ್ಮೆ ಅರ್ಜಿಯನ್ನು ಸಲ್ಲಿಸುವ ಅವಶ್ಯಕತೆ ಇಲ್ಲ. ಆದರೆ, ಹೊಸ ಅರ್ಜಿದಾರರು ಅರ್ಜಿಗಳನ್ನು ಸಲ್ಲಿಸಬಹುದು.
4. ಜಿಲ್ಲೆಗೆ/ವಿಧಾನಸಭಾ ಕ್ಷೇತ್ರಕ್ಕೆ ನೀಡಿದ ಗುರಿಯನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿವಿಧ ಜಾತಿಗಳ ಜನಸಂಖ್ಯೆಯ ಆಧಾರದ ಮೇಲೆ ಫಲಾನುಭವಿಗಳನ್ನು ಆಯ್ಕೆ ಮಾಡುವುದು ಮುಖ್ಯವಾಗಿ ಬಡವರಲ್ಲಿ ಅತಿ ಬಡವರನ್ನು ಆಯ್ಕೆ ಮಾಡುವುದು.
5. ಆಯ್ಕೆ ಸಮಿತಿ ಸಭೆಯ ನಡವಳಿಗಳನ್ನು ವಿಡಿಯೋಗ್ರಾಫ್ ಮಾಡುವುದು
6. ಆಯ್ಕೆ ಸಮಿತಿಯ ಆಯ್ಕೆ ಪ್ರಕ್ರಿಯೆಯನ್ನು ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳ ಒಳಗೆ ಪೂರ್ಣಗೊಳಿಸುವುದು. ಒಂದು ವೇಳೆ ಪೂರ್ಣಗೊಳಿಸದೇ ಇದ್ದಲ್ಲಿ, ಅಂತಹ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಿ ಸರ್ಕಾರದ ಆದೇಶದಂತೆ ಕ್ರಮ ಜರುಗಿಸುವುದು.
7. ಸದರಿ ಸಮಿತಿಗಳ ನಡವಳಿಯನ್ನು ಪಾರದರ್ಶಕವಾಗಿ ಯಾವುದೇ ಲೋಪ-ದೋಷಗಳು ಇಲ್ಲದೆ ಹೊರಡಿಸಬೇಕು. ಇದರಲ್ಲಿ ಲೋಪ-ದೋಷಗಳು ಇದ್ದಲ್ಲಿ [illegible] ಕಾರ್ಯದರ್ಶಿಗಳು ಹೊಣೆಗಾರರಾಗಿರುತ್ತಾರೆ.
8. ಆಯ್ಕೆಯಾದ ಪಟ್ಟಿಯನ್ನು ತಕ್ಷಣವೇ ಸಂಬಂಧಿಸಿದ ನಿಗಮಗಳ ಕೇಂದ್ರ ಕಛೇರಿಗೆ ಕಳುಹಿಸತಕ್ಕದ್ದು.

[illegible] ಫಲಾನುಭವಿಗಳ ಪಟ್ಟಿಯನ್ನು ಗ್ರಾಮಸಭೆಯ ಮೂಲಕ ನಿಗಮದ [illegible] ಪ್ರಾರಂಭಿಸುವುದು.

10. ಸದರಿ ಸಮಿತಿಗಳು ಅರ್ಹರಾದಂತ ಫಲಾನುಭವಿಗಳನ್ನು ಸಹ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದು.
11. ಬ್ಯಾಂಕ್ ಲಿಂಕ್ಡ್ ಸ್ವಯಂ ಉದ್ಯೋಗ/ಐ.ಎಸ್.ಬಿ.ಯೋಜನೆ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಅರ್ಜಿಗಳನ್ನು ಸಂಬಂಧಿಸಿದ ಬ್ಯಾಂಕುಗಳಿಗೆ ಕಳುಹಿಸತಕ್ಕದ್ದು ಮತ್ತು ಅರ್ಜಿಗಳ ಮಂಜೂರಾತಿ ಬಗ್ಗೆ ಬ್ಯಾಂಕ್ ಅಧಿಕಾರಿಗಳ ಜೊತೆ ಮತ್ತು ಆಯ್ಕೆಯಾದ ಅಭ್ಯರ್ಥಿಗಳನ್ನು ಸಹ ಸೇರಿಸಿಕೊಂಡು ಶೀಘ್ರವಾಗಿ ಮಂಜೂರಾತಿ ಪಡೆಯುವುದು. ಯೋಜನೆಗಳ ಷರತ್ತುಗಳಂತೆ ಸಹಾಯಧನವನ್ನು ಸಹ ಬ್ಯಾಂಕುಗಳಿಗೆ ಒದಗಿಸುವುದು.
12. ಬ್ಯಾಂಕುಗಳಿಂದ ಪಡೆದ ಸಾಲವನ್ನು ಸಾಲದ ಷರತ್ತುಗಳಂತೆ ವಸೂಲಾತಿಯಲ್ಲಿ ಸಹ ನಿಗಮದ ಅಧಿಕಾರಿಗಳು ಮತ್ತು ಜಿಲ್ಲಾ ಸಮಿತಿ ಸದಸ್ಯರು ಬ್ಯಾಂಕ್ ಅಧಿಕಾರಿಗಳಿಗೆ ಸೂಕ್ತ ಸಹಕಾರ ನೀಡಿ, ಸಹಾಯ ಮಾಡತಕ್ಕದ್ದು.

(ಗೋಪಾಲ್) 20/11/18
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಎಲ್ಲಾ ಜಿಲ್ಲಾಧಿಕಾರಿಗಳಿಗೆ.
2. ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಡಾ:ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

D:data/ML_Borewell_Gen Ltr

5


# ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

9 ಮತ್ತು 10ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕ ಗೋಪುರ, ಡಾ: ಬಿ.ಆರ್.ಅಂಬೇಡ್ಕರ್ ವೀದಿ,
ಬೆಂಗಳೂರು-560 001.


ಸಂಖ್ಯೆ: ಅಂಅನಿ/ಕೈ:ತ/ವಿನಿ-01/ಆಯ್ಕೆಪಟ್ಟಿ/2017-18/ 736-765 12/04/17 ದಿನಾಂಕ: 10.04.2017

## ಜ್ಞಾಪನಾ ಪತ್ರ

ವಿಷಯ: ಸೆಪ್ಟೆಂಬರ್ ಮಾಹೆಯೊಳಗೆ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಿ ಸಲ್ಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಸಕಇ 11 ಎಸ್‌ಡಿಸಿ 2017, ಬೆಂಗಳೂರು, ದಿನಾಂಕ: 20.02.2017.

---.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮೂಲಕ ಸಾಲಸೌಲಭ್ಯ ಪಡೆಯಲು ಅರ್ಹರಿರುವ ಫಲಾಪೇಕ್ಷಿಗಳ ಆಯ್ಕೆ ಪಟ್ಟಿಯನ್ನು ಆಯಾ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಆಯ್ಕೆ ಸಮಿತಿಯ ಎಲ್ಲಾ ಸದಸ್ಯರುಗಳು ಪ್ರತಿ ಆರ್ಥಿಕ ವರ್ಷದ ಸೆಪ್ಟೆಂಬರ್ ಒಳಗೆ ಪೂರ್ಣಗೊಳಿಸಿ, ಸಲ್ಲಿಸಲು ಉಲ್ಲೇಖಿತ ಪತ್ರದಲ್ಲಿ ಸರ್ಕಾರವು ಆದೇಶ ಹೊರಡಿಸಿರುತ್ತದೆ. ಸದರಿ ಆದೇಶದ ಪ್ರತಿಯನ್ನು ಈ ಪತ್ರಕ್ಕೆ ಲಗತ್ತಿಸಿದ್ದು, ಕಟ್ಟುನಿಟ್ಟಾಗಿ ಪಾಲಿಸಲು ತಮ್ಮ ಮಾಹಿತಿಗಾಗಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರು

ಪ್ರತಿಯನ್ನು:-

1. ಜಿಲ್ಲಾಧಿಕಾರಿಗಳು, 30 ಜಿಲ್ಲೆ – ಇವರ ಮಾಹಿತಿಗಾಗಿ ಕಳುಹಿಸಿದೆ.
2. ಪ್ರಧಾನ ವ್ಯವಸ್ಥಾಪಕರು(ಸಿಬ್ಬಂದಿ:ಆಡಳಿತ) / (ಕೈಗಾರಿಕೆ:ತರಬೇತಿ) / (ಅಭಿವೃದ್ಧಿ) / (ಹಣಕಾಸು)
3. ಉಪ ಪ್ರಧಾನ ವ್ಯವಸ್ಥಾಪಕರು, ಡಾ: ಬಿ.ಆರ್.ಅಂ.ಅ.ನಿ., ಬೆಂಗಳೂರು/ಮೈಸೂರು,/ಬೆಳಗಾವಿ ಮತ್ತು ಕಲಬುರಗಿ ವಿಭಾಗ.
4. ಜಿಲ್ಲಾ ವ್ಯವಸ್ಥಾಪಕರು, ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ______ ಜಿಲ್ಲೆ.
5. ಕಛೇರಿ ಪ್ರತಿ.

O/C

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸೆಪ್ಟೆಂಬರ್ ಮಾಹೆಯ ಒಳಗೆ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಿ ಸಲ್ಲಿಸುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ: ಸಕಇ 221 ಜಿಸಿವಿ 2008. ದಿನಾಂಕ: 02-01-2009.
2) ಸರ್ಕಾರದ ಆದೇಶ ಸಂಖ್ಯೆ: ಸಕಇ 162 ಎಸ್‌ಡಿಸಿ 2015. ದಿನಾಂಕ: 09-09-2015.
3) ಪತ್ರ ಸಂಖ್ಯೆ: ಅಂಅನಿ/ವಿನಿ-01/ಆಪ/2016-17/ 16642. ದಿನಾಂಕ:11-01-2017.

***

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2) ರ ಸರ್ಕಾರಿ ಆದೇಶದಲ್ಲಿ ಆಯಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಿರುವ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಬೆಂಗಳೂರು ಇವರು ಸದರಿ ಪತ್ರದಲ್ಲಿ ಈ ನಿಗಮದ ಎಲ್ಲಾ ಯೋಜನೆಗಳಡಿ ಫಲಾಪೇಕ್ಷಿಗಳನ್ನು ಆಯ್ಕೆ ಮಾಡುವ ಜವಾಬ್ದಾರಿಯನ್ನು ಸರ್ಕಾರದ ಆದೇಶದಂತೆ ಆಯಾ ಕ್ಷೇತ್ರದ ಶಾಸಕರ ಅಧ್ಯಕ್ಷತೆ ಇರುವ ಆಯ್ಕೆ ಸಮಿತಿಗೆ ವಹಿಸಿರುವಂತೆ ಪ್ರತಿ ಆರ್ಥಿಕ ವರ್ಷ ಆರಂಭಗೊಳ್ಳುವ ಏಪ್ರಿಲ್ ಮಾಹೆಯಲ್ಲಿ ಫಲಾಪೇಕ್ಷಿಗಳಿಗೆ ಸಾಲ-ಸೌಲಭ್ಯ ಒದಗಿಸಲು ಅರ್ಜಿಗಳನ್ನು ಆಹ್ವಾನಿಸಲು ಪತ್ರಿಕಾ ಪ್ರಕಟಣೆ ಹೊರಡಿಸಿ ನಂತರ ಸ್ವೀಕರಿಸಿದ ಅರ್ಜಿಗಳನ್ನು ಆಯಾ ವಿಧಾನಸಭಾ ಕ್ಷೇತ್ರವಾರು ಪಟ್ಟಿ ಮಾಡಿ ಶಾಸಕರುಗಳಿಗೆ ಗುರಿಗನುಗುಣವಾಗಿ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಿ ಜುಲೈ ಮಾಹೆಯೊಳಗೆ ಸಲ್ಲಿಸಲು 224 ವಿಧಾನಸಭಾ ಕ್ಷೇತ್ರದ ಶಾಸಕರುಗಳಿಗೆ ಈಗಾಗಲೇ ಅನೇಕ ಬಾರಿ ಮನವರಿಕೆ ಮಾಡಿಕೊಡಲಾಗಿದೆ. ಆದರೆ ಕೆಲವೇ ಶಾಸಕರುಗಳು ನಿಗಧಿತ ಸಮಯದೊಳಗೆ ಆಯ್ಕೆಪಟ್ಟಿಯನ್ನು ಸಲ್ಲಿಸುತ್ತಿದ್ದು, ಹೆಚ್ಚಿನ ಶಾಸಕರುಗಳು ಆರ್ಥಿಕ ವರ್ಷ ಮುಗಿಯುವ ಹಂತದಲ್ಲಿ ಸಲ್ಲಿಸುತ್ತಿದ್ದು, ಆ ಅವಧಿಗೆ ಬ್ಯಾಂಕುಗಳಲ್ಲಿ ಆರ್ಥಿಕ ಚಟುವಟಿಕೆಗಳು ಕೊನೆ ಹಂತದಲ್ಲಿ ಇರುವುದರಿಂದ ಸಾಲ ಮಂಜೂರಾಗುವ ಸಾಧ್ಯತೆ ಕಡಿಮೆ ಇರುತ್ತದೆ. ಇದರಿಂದ ಅರ್ಹ ಫಲಾಪೇಕ್ಷಿಗಳಿಗೆ ಅನ್ಯಾಯ ಮಾಡಿದಂತಾಗುತ್ತದೆ. ಕಾರಣ ಬ್ಯಾಂಕುಗಳ ಜಿಲ್ಲಾ ಕ್ರೆಡಿಟ್ ಪ್ಲಾನ್ ಪ್ರಕಾರ ಯೋಜಿಸಲಾದ ಕಾರ್ಯಕ್ರಮಗಳನ್ನು ಆಯಾ ವರ್ಷದ ಅಂತ್ಯದೊಳಗೆ ಸಾಧಿಸಬೇಕಾಗಿದ್ದು, ಸಾಧಿಸದೇ ಬಾಕಿ ಉಳಿಯುವ ಗುರಿಯನ್ನು ಮುಂದಿನ ವರ್ಷಕ್ಕೆ ಸೇರಿಸಿಕೊಂಡು ಅನುಷ್ಠಾನ ಮಾಡುವ ಅವಕಾಶವಿರುವುದಿಲ್ಲ. ಆದ್ದರಿಂದ ನಿಗಮದ ಯೋಜನೆಗಳನ್ನು ಅನುಷ್ಠಾನಗೊಳಿಸಿ. ಜನಸಾಮಾನ್ಯರಿಗೆ ಶೀಘ್ರವಾಗಿ ತಲುಪಿಸುವ ಹಿತದೃಷ್ಟಿಯಿಂದ ಎಲ್ಲಾ ಶಾಸಕರುಗಳು ಪ್ರತಿ ಆರ್ಥಿಕ ವರ್ಷದ ಸೆಪ್ಟೆಂಬರ್ ಮಾಹೆಯ ಒಳಗೆ ಆಯ್ಕೆ ಪಟ್ಟಿಗಳನ್ನು ಸಲ್ಲಿಸುವಂತೆ ಸೂಚಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

--2

ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 11 ಎಸ್‌ಡಿಸಿ 2017,
ಬೆಂಗಳೂರು, ದಿನಾಂಕ:20/02/2017.

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಡಿ ಫಲಾಪೇಕ್ಷಿಗಳನ್ನು ಮಾನ್ಯ ಶಾಸಕರುಗಳು, ನಿಗಧಿತ ಅವಧಿಯಲ್ಲಿ ಆಯ್ಕೆ ಮಾಡದಿದ್ದಲ್ಲಿ, ಜಿಲ್ಲಾಧಿಕಾರಿಗಳು, ಫಲಾನುಭವಿಗಳನ್ನು ಆಯ್ಕೆ ಮಾಡುವಂತೆ ಆದೇಶಿಸಲಾಗಿದೆ.

ಈ ಆದೇಶವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಬಿ.ಎನ್.ಸುಮತಿ) 20/2/17
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಗಳು:-

1. ಮಹಾಲೇಖಪಾಲರು (ಎ & ಇ ಲೆಕ್ಕ ಪರಿಶೋಧನೆ-1, 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

SEP-DL

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿವಿಧ ಅಭಿವೃದ್ಧಿ ನಿಗಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದವರಿಗೆ ಘಟಕ ವೆಚ್ಚ ರೂ.50,000/- ವೆಚ್ಚದಲ್ಲಿ ಸ್ವಯಂ ಉದ್ಯೋಗಕ್ಕಾಗಿ ಸಹಾಯಧನ ಮತ್ತು ಸಾಲ ನೀಡುವ ಕುರಿತು.

ಓದಲಾಗಿದೆ. (1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿ.. ಇವರ ಪತ್ರ ಸಂಖ್ಯೆ:ಕಾಅನಿ/2020-21/12 ದಿ: 14-08-2020.

(2)ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ತಿನ ಸಭೆ ನಡವಳಿ ದಿನಾಂಕ: 28-05-2020.

******

**ಪ್ರಸ್ತಾವನೆ:**

ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ತಿನ ಸಭೆಯ ನಡವಳಿ ದಿನಾಂಕ: 28-05-2020ರಂದು 2020-21ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ಕ್ರಿಯಾ ಯೋಜನೆಯನ್ನು ಅನುಮೋದಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ, ಕೋವಿಡ್-19 ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಸ್ವಯಂ ಉದ್ಯೋಗ ಯೋಜನೆಯಲ್ಲಿ ತರಕಾರಿ, ಹಣ್ಣು-ಹಂಪಲು, ಮೀನು, ಮಾಂಸ ಮಾರಾಟ, ಕುರಿ/ಹಂದಿ/ಮೊಲ ಸಾಕಾಣಿಕೆ ಇತ್ಯಾದಿ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ಮಳಿಗೆ/ತಳ್ಳುಗಾಡಿ/ದುಡಿಮೆ ಬಂಡವಾಳ ಸೇರಿದಂತೆ ಗರಿಷ್ಠ ಘಟಕ ವೆಚ್ಚ ರೂ.50,000/-ರಲ್ಲಿ ನಿಗಮಗಳಿಂದ ಸಾಲ ಮತ್ತು ಸಹಾಯಧನ ನೀಡಲು ಅನುಮೋದಿಸಲಾಗಿರುತ್ತದೆ. (ಗರಿಷ್ಠ ಸಾಲ ರೂ.25,000/-, ಗರಿಷ್ಠ ಸಹಾಯಧನ ರೂ.25,000/-ಮಾತ್ರ).

ಸದರಿ ಸ್ವಯಂ ಉದ್ಯೋಗ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ನಿ.. ಇವರು ಮೇಲೆ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಆದರೆ ಸದರಿ ಯೋಜನೆಯನ್ನು ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಇತರೆ ನಿಗಮಗಳಾದ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಮತ್ತು ಪರಿಶಿಷ್ಟ ಜಾತಿಯ ಅಲೆಮಾರಿ, ಅರೆ-ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳ ಅಭಿವೃದ್ಧಿ ಕೋಶ ಸೇರಿದಂತೆ ಎಲ್ಲಾ ನಿಗಮಗಳಿಗೂ 2020-21ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಅನುಷ್ಠಾನಗೊಳಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 195 ಎಸ್‌ಡಿಸಿ 2020,**
**ಬೆಂಗಳೂರು, ದಿನಾಂಕ: 10-09-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ವಿವಿಧ ಅಭಿವೃದ್ಧಿ ನಿಗಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದವರ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಯೋಜನೆಯಡಿ ತರಕಾರಿ, ಹಣ್ಣು-ಹಂಪಲು, ಮೀನು, ಮಾಂಸ ಮಾರಾಟ ಕುರಿ/ಹಂದಿ/

....2

(೮) ... ಚಟುವಟಿಕೆಗಳಿಗಾಗಿ ಮಳಿಗೆ/ತಳ್ಳುಗಾಡಿ/ಗುಡಿಸಿ ...
...ಮೊಲ ಸಾಕಾಣಿಕೆ ಇತ್ಯಾದಿ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ... ಶೇ.50% ಸಾಲ (ಗರಿಷ್ಠ ರೂ.25,000/-) ಸೇರಿದಂತೆ ಗರಿಷ್ಠ ಘಟಕ ವೆಚ್ಚ ರೂ.50,000/- ರಲ್ಲಿ ಶೇ.50% ಸಾಲ (ಗರಿಷ್ಠ ರೂ.25,000/-) ನೀಡುವ ಸ್ವಯಂ ಉದ್ಯೋಗ ಯೋಜನೆಯನ್ನು ಶೇ.50% ಸಹಾಯಧನ (ಗರಿಷ್ಠ ರೂ.25,000/-) ನೀಡುವ ಸ್ವಯಂ ಉದ್ಯೋಗ ಯೋಜನೆಯನ್ನು 2020-21ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಅನುಷ್ಠಾನಗೊಳಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

ಷರತ್ತುಗಳು:

1) ಸಾಲ ಮತ್ತು ಸಹಾಯಧನವನ್ನು ಚಟುವಟಿಕೆಗಳ ಆಧಾರದ ಮೇಲೆ ಮಂಜೂರು ಮಾಡುವುದು ಮತ್ತು ಈ ಕೆಳಕಂಡ ದಾಖಲಾತಿಗಳನ್ನು ಫಲಾನುಭವಿಗಳಿಂದ ಪಡೆಯತಕ್ಕದ್ದು.

- ಪ್ರಾಮಿಸರಿ ನೋಟು (Promissory Note).
- ಸಾಲ ಕರಾರು ಪತ್ರ (Loan Agreement).
- ಮರುಪಾವತಿ ಪತ್ರ (Letter of Repayment).
- ಪ್ರತಿಫಲ ರಸೀದಿ ಪತ್ರ (Consideration Receipt).
- ಆಧಾರ ಪತ್ರ (Hypothecation Deed).
- ಖಾತರಿ ಪತ್ರ (Letter of Guarantee).

ಎಲ್ಲಾ ನಿಗಮಗಳು ಮೇಲ್ಕಂಡ ದಾಖಲೆಗಳ ನಮೂನೆಗಳನ್ನು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿರುವಂತೆ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದಿಂದ ಪಡೆಯತಕ್ಕದ್ದು.

2) ಫಲಾನುಭವಿಗಳಿಗೆ ಸಾಲ ನೀಡಿದ ಬಗ್ಗೆ ಸಾಲ ನಿರ್ವಹಣೆ ವಹಿಯನ್ನು ನಿಗಮಗಳ ಮುಖ್ಯಸ್ಥರು ನಿರ್ವಹಿಸತಕ್ಕದ್ದು (Loan Registrar).

3) ಮರುಪಾವತಿ ಅವಧಿ:- ಸದರಿ ಯೋಜನೆಯಲ್ಲಿ ಪಡೆದ ಸಾಲವನ್ನು ಫಲಾನುಭವಿ ವಾರ್ಷಿಕ ಶೇ.4 ರ ಬಡ್ಡಿ ದರದಲ್ಲಿ 18 ತಿಂಗಳ ಒಳಗೆ ಮರುಪಾವತಿಸಬೇಕು. ಮಂಜೂರಾತಿಯಾಗಿ 3 ತಿಂಗಳ ನಂತರ ಮರುಪಾವತಿ ಪ್ರಾರಂಭಿಸತಕ್ಕದ್ದು.

*4% interest 18 months period - starts after 3 months*

4) ಫಲಾಪೇಕ್ಷಿಗಳು ಸಾಲ ಮತ್ತು ಸಹಾಯಧನವನ್ನು ಕೋರಿರುವ ಚಟುವಟಿಕೆಗಳಿಗೆ ಉಪಯೋಗ ಮಾಡಿಕೊಂಡಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳತಕ್ಕದ್ದು.

5) ಯಾವುದೇ ಕಾರಣಕ್ಕೆ ಸಹಾಯಧನ ಮತ್ತು ಸಾಲದ ಮೊತ್ತ ದುರುಪಯೋಗವಾದಂತೆ ಎಚ್ಚರಿಕೆ ವಹಿಸತಕ್ಕದ್ದು. ಫಲಾನುಭವಿಯು ಸಾಲದ ಮೊತ್ತದಿಂದ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಮಳಿಗೆ/ಸಾಮಗ್ರಿಗಳು ಇತ್ಯಾದಿ ಪಡೆದಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳತಕ್ಕದ್ದು.

6) ಸಾಲ ಮರುಪಾವತಿ ಮಾಡದ ಫಲಾನುಭವಿಗಳ ಬಗ್ಗೆ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.

ಈ ಆದೇಶವನ್ನು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 28-05-2020 ರಂದು ಜರುಗಿದ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ತಿನಲ್ಲಿ ಅನುಮೋದಿಸಿದ ನಡವಳಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

10/9/2020

(ಪಿ.ಎನ್.ನಾಗರಾಜ್)
ಸರ್ಕಾರ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

(1) ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.

47

(3) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು

(4) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು

(5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು

(6) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ, ಬೆಂಗಳೂರು

(7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ,

(8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ, ಬೆಂಗಳೂರು

(9) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು

(10) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಬೆಂಗಳೂರು

(11) ವಿಶೇಷ ಅಧಿಕಾರಿ, ಪರಿಶಿಷ್ಟ ಜಾತಿಯ ಅಲೆಮಾರಿ, ಅರೆಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳ ಅಭಿವೃದ್ಧಿ ಕೋಶ, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು

(12) ನಿರ್ದೇಶಕರು, ಎಸ್.ಸಿ.ಸ್.ಪಿ/ಟಿ.ಎಸ್.ಪಿ. ಕೋಶ, ಕಲ್ಯಾಣ ಕೇಂದ್ರ, ಯವನಿಕ, ನೃಪತುಂಗ ರಸ್ತೆ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:

1) ಮಾನ್ಯ ಉಪ ಮುಖ್ಯಮಂತ್ರಿಯವರು, ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ,
4) ಸರ್ಕಾರದ ಉಪ ಕಾರ್ಯದರ್ಶಿ 1 & 2ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ,
5) ಸರ್ಕಾರದ ಅಧೀನ ಕಾರ್ಯದರ್ಶಿ- 1, 2 & 3, ಸಮಾಜ ಕಲ್ಯಾಣ ಇಲಾಖೆ.
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

-----

13

*MCF prerana*

(46)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಹಿಳಾ ಸ್ವಸಹಾಯ ಸಂಘಗಳಿಗೆ "ಪ್ರೇರಣಾ ಯೋಜನೆ" ಆದಿ ಆರ್ಥಿಕ ಚಟುವಟಿಕೆಗಳಿಗಾಗಿ ಮೈಕ್ರೋಕ್ರೆಡಿಟ್ ಯೋಜನೆಯನ್ನು ಸಂಬಂಧಿಸಿದ ನಿಗಮಗಳಿಂದ ಜಾರಿಗೊಳಿಸುವ ಬಗ್ಗೆ.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಏಕಕಡತ ಸಂಖ್ಯೆ:ಅಂಅನಿ/ಕ್ರೆ ಕಿರು/ ಪ್ರಸ್ತಾವನೆ-69/2018-19 ದಿನಾಂಕ:21-08-2018

1319
23/2/19

*****

**ಪ್ರಸ್ತಾವನೆ:-**

ಮೇಲೆ ಓದಲಾದ ಏಕಕಡತ ಪ್ರಸ್ತಾವನೆಯಲ್ಲಿ ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಮೈಕ್ರೋಕ್ರೆಡಿಟ್ (ಕಿರುಸಾಲ) ಯೋಜನೆ ಲೆಕ್ಕಶೀರ್ಷಿಕೆ 2225-01-190-2-09/4225-01-190-0-03 ಇದರಡಿಯಲ್ಲಿ ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರಿಗೆ ತಲಾ ರೂ.10,000/- ಸಹಾಯಧನ ಮತ್ತು ರೂ.5,000/- ನೇರಸಾಲ ಒಟ್ಟು ರೂ.15,000/-ಗಳನ್ನು ಅತಿ ಸಣ್ಣ ವ್ಯಾಪಾರ ವಹಿವಾಟು ಮಾಡಲು ನೀಡಲಾಗುತ್ತಿದೆ. ಅಲ್ಲದೇ ಮೈಕ್ರೋಫೈನಾನ್ಸ್-1 ಯೋಜನೆ ಲೆಕ್ಕಶೀರ್ಷಿಕೆ 2225-01-190-2-01 ಅಡಿಯಲ್ಲಿ ಸಣ್ಣ ಮತ್ತು ಅತಿಸಣ್ಣ ವ್ಯಾಪಾರದ ಘಟಕವನ್ನು ಸ್ಥಾಪಿಸಲು ರೂ.10,000/- ಸಹಾಯಧನ ಮತ್ತು ರೂ.15,000/- ನೇರಸಾಲ ಸೇರಿದಂತೆ ಒಟ್ಟು ರೂ.25,000/-ಗಳನ್ನು ನೀಡಲಾಗುತ್ತಿದೆ. ಮಹಿಳಾ ಸಮೃದ್ಧಿ ಯೋಜನೆ ಲೆಕ್ಕಶೀರ್ಷಿಕೆ 2225-01-190-2-01 ಇದರಡಿ ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರದ ಘಟಕವನ್ನು ಸ್ಥಾಪಿಸಲು ರೂ.15,000/- ಸಹಾಯಧನ ಮತ್ತು ರೂ.10,000/- ನೇರಸಾಲವನ್ನು ನೀಡಲಾಗುತ್ತಿದೆ.

ಮೇಲ್ಕಂಡ ಸಹಾಯಧನ ಮತ್ತು ಸಾಲವನ್ನು ಫಲಾನುಭವಿಗಳ ಖಾತೆಗಳಿಗೆ ಬಿಡುಗಡೆ ಮಾಡಲಾಗುತ್ತಿದೆ. ಸದರಿ ಯೋಜನೆಗಳನ್ನು ಉತ್ತಮಗೊಳಿಸಲು ಮಹಿಳಾ ಸ್ವಸಹಾಯ ಸಂಘದ ಮೂಲಕ ಆದಾಯ ಗಳಿಸುವ ಉತ್ಪಾದನಾ/ಸೇವಾ ಘಟಕಗಳನ್ನು ಆರಂಭಿಸಲು ಮೈಕ್ರೋಕ್ರೆಡಿಟ್ ಯೋಜನೆಯನ್ನು ಪರಿಷ್ಕರಣೆ ಮಾಡಲು ಕೋರಿರುತ್ತಾರೆ.

ಪ್ರತಿ ಮಹಿಳಾ ಸದಸ್ಯರಿಗೆ ರೂ.15,000/- ಸಹಾಯಧನ ಮತ್ತು ರೂ.10,000/- ಸಾಲ ಸೇರಿದಂತೆ ಒಟ್ಟು ರೂ.25,000/-ಗಳಂತೆ ಒಟ್ಟಾರೆ ರೂ.2.50 ಲಕ್ಷಗಳನ್ನು ಉತ್ಪಾದನಾ/ಸೇವಾ ಸ್ವಸಹಾಯ ಗುಂಪುಗಳಿಗೆ ಕನಿಷ್ಠ 10 ಮಹಿಳಾ ಸದಸ್ಯರಿರುವ ಸ್ವಸಹಾಯ ಸಂಘಗಳಿಗೆ ನೀಡಲು ಸರ್ಕಾರದ ಆದೇಶ ಹೊರಡಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಲು ನಿರ್ಧರಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 301 ಎಸ್‌ಡಿಸಿ 2018, ಬೆಂಗಳೂರು, ದಿನಾಂಕ:21.02.2019:**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಹಿಳಾ ಸ್ವಸಹಾಯ ಗುಂಪುಗಳಿಗೆ "ಪ್ರೇರಣಾ ಯೋಜನೆ - ಮೈಕ್ರೋಕ್ರೆಡಿಟ್" ಎಂಬ ಹೆಸರಿನಲ್ಲಿ ಮಹಿಳಾ ಸ್ವಸಹಾಯ ಸಂಘಗಳ ಒಟ್ಟು ಸದಸ್ಯರಿಗೆ ರೂ.15,000/- ಸಹಾಯಧನ ಮತ್ತು ರೂ.10,000/- ನೇರಸಾಲ ಸೇರಿದಂತೆ ಒಟ್ಟು ರೂ.25,000/-ಗಳನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತುಗಳು:**

1) ಹಾಲಿ ಜಾರಿಯಲ್ಲಿರುವ ಅ) ಮೈಕ್ರೋಕ್ರೆಡಿಟ್ (ಕಿರುಸಾಲ) ಯೋಜನೆ, ಆ) ಮೈಕ್ರೋಫೈನಾನ್ಸ್-1 ಯೋಜನೆ ಮತ್ತು ಇ) ಮಹಿಳಾ ಸಮೃದ್ಧಿ ಯೋಜನೆಗಳನ್ನು "ಪ್ರೇರಣಾ ಯೋಜನೆ - ಮೈಕ್ರೋಕ್ರೆಡಿಟ್"ನಲ್ಲಿ ವಿಲೀನಗೊಳಿಸಿದೆ.

2) ಕನಿಷ್ಠ 10 ಮಹಿಳೆಯರು ಸ್ವಸಹಾಯ ಗುಂಪಿನಲ್ಲಿ ಸದಸ್ಯರಾಗಿರಬೇಕು. ಈ ಪೈಕಿ ಕನಿಷ್ಠ ಶೇ.80 ರಷ್ಟು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿರಬೇಕು. ಸದರಿ ಸ್ವಸಹಾಯ ಸಂಘ ನೋಂದಣಿಯಾದ ಸಂಘ ಆಗಿರಬೇಕು. ಸಂಘದ ಸದಸ್ಯರು ಬಿ.ಪಿ.ಎಲ್./ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್ ಹೊಂದಿರಬೇಕು. (only for coastal; 100% for other districts)

3) ಸಂಘದ ಹೆಸರಿನಲ್ಲಿ ಬ್ಯಾಂಕ್ ಖಾತೆ ಹೊಂದಿರಬೇಕು.

4) ಸಂಘದ ಸದಸ್ಯರು ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹೊಂದಿರಬೇಕು ಹಾಗೂ 18 ವರ್ಷಕ್ಕೆ ಮೇಲ್ಪಟ್ಟಿರಬೇಕು.

5) ಒಟ್ಟು ಸದಸ್ಯರಿಗೆ ಒಟ್ಟು ರೂ.25,000/- ರಂತೆ (ರೂ.15,000/- ಸಹಾಯಧನ ಮತ್ತು ರೂ.10,000/- ಸಾಲ) ಒಟ್ಟು 10 ಸದಸ್ಯರಿಗೆ ಒಟ್ಟು ರೂ.2.50 ಲಕ್ಷ ನೀಡುವುದು. ಒಂದು ವೇಳೆ ಸಂಘದಲ್ಲಿ 10ಕ್ಕಿಂತ ಹೆಚ್ಚಿನ ಸದಸ್ಯರಿದ್ದಲ್ಲಿ, ಸದರಿ ಸಂಖ್ಯೆಗನುಗುಣವಾಗಿ ಸಾಲ-ಸಹಾಯಧನ ನೀಡುವುದು.

6) ಸದರಿ ಸ್ವಸಹಾಯ ಸಂಘ ಆದಾಯ ಬರುವ ಆರ್ಥಿಕ ಚಟುವಟಿಕೆಗಳಾದ ಉತ್ಪಾದನಾ/ಸೇವಾ ಘಟಕಗಳನ್ನು ಕೈಗೊಳ್ಳತಕ್ಕದ್ದು.

7) ಸದರಿ ಸಂಘ ಹಣಕಾಸಿನ ವಹಿವಾಟು ಮತ್ತು ಸಾಲ-ಸಹಾಯಧನವನ್ನು ಬಳಸಿಕೊಳ್ಳುತ್ತಿರುವ ಬಗ್ಗೆ ಅಗತ್ಯ ದಾಖಲೆಗಳನ್ನು ವಿವರಗಳೊಂದಿಗೆ ಸಲ್ಲಿಸತಕ್ಕದ್ದು.

8) ನಿಗಮಗಳಿಂದ ಸಹಾಯಧನ ಮತ್ತು ಸಾಲವನ್ನು ನೇರವಾಗಿ ಘಟಕದ ಚಟುವಟಿಕೆಗಳ ಆಧಾರದ ಮೇಲೆ 2 ಕಂತುಗಳಲ್ಲಿ ಸಂಘದ ಬ್ಯಾಂಕ್ ಖಾತೆಗೆ ನೀಡುವುದು.

9) ಸದರಿ ಸಂಘದವರು ಅಧ್ಯಕ್ಷರು ಮತ್ತು ಕಾರ್ಯದರ್ಶಿಯವರನ್ನು ಆಯ್ಕೆ ಮಾಡಿಕೊಂಡು ಅವರ ಜಂಟಿ ಸಹಿಯೊಂದಿಗೆ ಅನುದಾನವನ್ನು ಬಳಸಿಕೊಳ್ಳುವುದು. ಆದರೆ ಅಧ್ಯಕ್ಷರು ಮತ್ತು ಕಾರ್ಯದರ್ಶಿ ಕಡ್ಡಾಯವಾಗಿ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿರತಕ್ಕದ್ದು.

10) ಪ್ರೇರಣಾ ಯೋಜನೆಯನ್ನು ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಕರ್ನಾಟಕ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮಗಳು ಅವರ ವ್ಯಾಪ್ತಿಯಲ್ಲಿ ಬರುವ ಫಲಾನುಭವಿಗಳಿಗೆ ಈ ಸೌಕರ್ಯಗಳನ್ನು ಒದಗಿಸುವುದು.

11) ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಜಾತಿಗಳು ಸಂಬಂಧಿಸಿದ ಆಯಾ ಅಭಿವೃದ್ಧಿ ನಿಗಮಕ್ಕೆ ಅರ್ಜಿ ಸಲ್ಲಿಸತಕ್ಕದ್ದು.

12) ಸ್ವಸಹಾಯ ಸಂಘದವರು ನಿಗಮಗಳಿಂದ ನೀಡಿದ ಸಾಲವನ್ನು ವಾರ್ಷಿಕವಾಗಿ ಶೇ.4ರ ಬಡ್ಡಿದರದಲ್ಲಿ ಸಾಲ ಮತ್ತು ಬಡ್ಡಿಯನ್ನು 3 ವರ್ಷಗಳಲ್ಲಿ ಮಾಸಿಕ/ತ್ರೈಮಾಸಿಕ ಕಂತುಗಳಲ್ಲಿ ಮರುಪಾವತಿ ಮಾಡತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಸಮಾಜ ಕಲ್ಯಾಣ ಇಲಾಖೆಯ ವಿವಿಧ ಕಾರ್ಯಕ್ರಮಗಳಡಿ ಹಂಚಿಕೆಯಾಗಿರುವ ಲೆಕ್ಕಶೀರ್ಷಿಕೆ 2225-01-190-2-09/4225-01-190-0-03 ಮತ್ತು 2225-02-190-2-07/4225-02-190-1-02 ರಡಿ ಭರಿಸತಕ್ಕದ್ದು.

ಮೈಕ್ರೋಕ್ರೆಡಿಟ್ ಯೋಜನೆ:- ಮಹಿಳಾ ಸ್ವಸಹಾಯ ಯೋಜನೆಗೆ ಸಹಾಯಧನ ರೂ.15,000/- ಮತ್ತು ಸಾಲ ರೂ.10,000/- ನೀಡಲು 2018-19ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ರಾಜ್ಯ ಅಭಿವೃದ್ಧಿ ಪರಿಷತ್ತಿನ ಸಭೆ ದಿನಾಂಕ:28-09-2018ರಲ್ಲಿ ಅನುಮೋದನೆಗೊಂಡಿರುತ್ತದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 05 ಟಿಎಫ್‌ಪಿ 2018, ದಿನಾಂಕ: 05-04-2018ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-
1. ಮಹಾಲೇಖಪಾಲರು (ಎ & ಇ/ಲೆಕ್ಕ ಪರಿಶೋಧನೆ-1, 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.

19

To-day

43

ಕರ್ನಾಟಕ ಸರ್ಕಾರ

ಸಂಖ್ಯೆ: ಸಕಇ 409 ಎಸ್‌ಡಿಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 08-09-2020.

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

ಇವರಿಗೆ:

1. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು , ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಬೆಂಗಳೂರು
3. ವ್ಯವಸ್ಥಾಪಕ ನಿರ್ದೇಶಕರು, ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕೆಗಳ ಅಭಿವೃದ್ಧಿ ನಿಗಮ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು ,ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ , ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು ,ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ , ಬೆಂಗಳೂರು
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು ,ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ , ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ , ಬೆಂಗಳೂರು.

16/9/2020

ಮಾನ್ಯರೇ,

**ವಿಷಯ:** 2020-21ನೇ ಸಾಲಿಗೆ ಹೊಸ ಯೋಜನೆ- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ/ ಯುವತಿಯರಿಗೆ ಸಣ್ಣ ಸರಕು ಸಾಗಾಣಿಕೆ ವಾಹನಗಳನ್ನು ಖರೀದಿಸಲು ಸಾಲ ಸೌಲಭ್ಯ ಒದಗಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಮುಖ್ಯಮಂತ್ರಿಯವರು 2020-21ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಕಂಡಿಕೆ 83ರಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಿರುತ್ತಾರೆ.

**"ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ/ ಯುವತಿಯರಿಗೆ ಸಣ್ಣ ಸರಕು ಸಾಗಾಣಿಕೆ ವಾಹನಗಳನ್ನು ಖರೀದಿಸಲು ಸಾಲ ಸೌಲಭ್ಯ ಒದಗಿಸಲಾಗುವುದು"**

ಈ ಮೇಲ್ಕಂಡ ಆಯವ್ಯಯ ಘೋಷಣೆಯಂತೆ ಸೂಕ್ತ ಆದೇಶ ಹೊರಡಿಸಲು ಸದರಿ ವಿಷಯವು ಹೊಸ ಯೋಜನೆಯೇ ಅಥವಾ ಈಗಾಗಲೇ ಚಾಲ್ತಿಯಲ್ಲಿರುವ ಯೋಜನೆಯಾಗಿದ್ದಲ್ಲಿ ಅದಕ್ಕೆ ಸೂಕ್ತ ತಿದ್ದುಪಡಿ/ಮಾರ್ಪಾಡು ಆದೇಶ ಹೊರಡಿಸಬೇಕೆ ಎಂಬ ಬಗ್ಗೆ ಪರಿಶೀಲಿಸಿ ತಮ್ಮ ನಿಗಮ/ಮಂಡಳಿಗಳ ವ್ಯಾಪ್ತಿಗಳಿಗೆ ಸಂಬಂಧಿಸಿದಂತೆ ಮಾಹಿತಿಗಳನ್ನು ಪಡೆದು ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

8/9/2020

**(ಪಿ.ಎನ್. ನಾಗರಾಜ್)**
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

# ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)

9 ಮತ್ತು 10ನೇ ಮಹಡಿ, ವಿಶ್ವೇಶ್ವರಯ್ಯ, ಚಿಕ್ಕಗೋಪುರ, ಡಾ॥ ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು - 560 001

[illegible], 22865132

Email Id : mdadcl2011@gmail.com ಫ್ಯಾಕ್ಸ್ : (080) 22860396


42

ಸಂಖ್ಯೆ:ಅಂಅನಿ/ಕೈ-ತ/ಆಸ/2019-20 8986 - [illegible] 04/12/19 ದಿನಾಂಕ:02.12.2019

## ಸುತ್ತೋಲೆ

ವಿಷಯ: ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗೆ ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರುಗಳನ್ನು ನೇಮಕ ಮಾಡಿರುವ ಬಗ್ಗೆ.

ಉಲ್ಲೇಖ: 1. ಸರ್ಕಾರಿ ಆದೇಶ ಸಂಖ್ಯೆ: ಸಕಇ: 162: ಎಸ್‌ಡಿಸಿ: 2015 (ಭಾ) ಬೆಂಗಳೂರು, ದಿನಾಂಕ:04.07.2016.

2. ಸರ್ಕಾರಿ ತಿದ್ದುಪಡಿ ಆದೇಶ ಸಂಖ್ಯೆ: ಸಕಇ: 162: ಎಸ್‌ಡಿಸಿ: 2015 (ಭಾ) ಬೆಂಗಳೂರು, ದಿನಾಂಕ:07.11.2019.

3. ದಿನಾಂಕ:30.10.2019ರಂದು ಜರುಗಿದ ಕರ್ನಾಟಕ ವಿಧಾನ ಪರಿಷತ್ತಿನ 2019-20ನೇ ಸಾಲಿನ ಹಕ್ಕು ಬಾಧ್ಯತಾ ಸಮಿತಿ ಸಭೆ ನಡವಳಿಗಳಂತೆ.

4. ದಿನಾಂಕ: 25.11.2019ರಂದು ಉಪ ಪ್ರದಾನ ವ್ಯವಸ್ಥಾಪಕರು /ಜಿಲ್ಲಾ ವ್ಯವಸ್ಥಾಪಕರ ಪ್ರಗತಿ ಪರಿಶೀಲನಾ ಸಭೆಯಲ್ಲಿ ನೀಡಿದ ಸೂಚನೆಯಂತೆ.

===

ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ವಿವಿಧ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಡಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಉಲ್ಲೇಖ (1)ರಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದಲ್ಲಿ ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರನ್ನು "ಉಪಾಧ್ಯಕ್ಷರು" ಎಂದು ಸೂಚಿಸಿ ಆದೇಶ ಹೊರಡಿಸಲಾಗಿರುತ್ತದೆ.

ಮುಂದುವರೆದು, ಉಲ್ಲೇಖ (2)ರಂತೆ ಈ ಹಿಂದಿನ ಆದೇಶವನ್ನು ತಿದ್ದುಪಡಿ ಮಾಡಿ ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ ಸದಸ್ಯರು ಎಂಬುವುದರ ಬದಲಾಗಿ ಶಾಸಕರು, ವಿಧಾನ ಪರಿಷತ್‌ರವರನ್ನು "ಸಹ ಅಧ್ಯಕ್ಷರು" ಎಂದು ತಿದ್ದಿ ಓದಿಕೊಳ್ಳತಕ್ಕದ್ದೆಂದು ಆದೇಶ ಹೊರಡಿಸಲಾಗಿರುತ್ತದೆ ಹಾಗೂ ಒಂದು ವೇಳೆ ಒಂದಕ್ಕಿಂತ ಹೆಚ್ಚು ವಿಧಾನ ಪರಿಷತ್ ಸದಸ್ಯರಿದ್ದಲ್ಲಿ ಈ ಪೈಕಿ ಹಿರಿಯ ಸದಸ್ಯರನ್ನು "ಸಹ ಅಧ್ಯಕ್ಷ" ರನ್ನಾಗಿ ನೇಮಕ ಮಾಡಲು ಸೂಚನೆ ಆದೇಶ ಹೊರಡಿಸಲಾಗಿರುತ್ತದೆ.

ಉಲ್ಲೇಖ(1) ಮತ್ತು (2)ರ ಸರ್ಕಾರ ಆದೇಶದಂತೆ ಸದರಿ ವಿಧಾನ ಪರಿಷತ್ ಸದಸ್ಯರನ್ನು ಶಾಸಕರು, ವಿಧಾನ ಪರಿಷತ್ತು "ಸಹ ಅಧ್ಯಕ್ಷರು" ಎಂದು ಸಭಾ ಸೂಚನಾ ಪತ್ರದಲ್ಲಿ ನಮೂಧಿಸದೇ ಕೆಲವು ಜಿಲ್ಲಾ ವ್ಯವಸ್ಥಾಪಕರುಗಳು /ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು "ಸದಸ್ಯರು" ಎಂದು ನಮೂದಿಸಿ ಸೂಚನಾ ಪತ್ರ ನೀಡಿದ್ದು, ಇಂತಹ ಜಿಲ್ಲಾ ವ್ಯವಸ್ಥಾಪಕರುಗಳ ವಿರುದ್ಧ ಉಲ್ಲೇಖ (3)ರಂತೆ ದಿನಾಂಕ:30.10.2019ರಂದು ಕರ್ನಾಟಕ ವಿಧಾನ ಪರಿಷತ್ 2019-20ನೇ ಸಾಲಿನ ಹಕ್ಕು ಬಾಧ್ಯತಾ ಸಮಿತಿ ಸಭೆಯಲ್ಲಿ ಹಕ್ಕು ಚ್ಯುತಿ ಮಂಡನೆಯಾಗಿ ಇಲಾಖೆಯ/ ನಿಗಮದ ಹಿರಿಯ ಅಧಿಕಾರಿಗಳು ತೀವ್ರ ಮುಜುಗರಕ್ಕೊಳಪಡಲಾಯಿತು ಹಾಗೂ ಈ ಕುರಿತು ಉಲ್ಲೇಖ (4)ರಂತೆ ದಿನಾಂಕ:25.11.2019 ಜರುಗಿದ ಉಪ ಪ್ರಧಾನ ವ್ಯವಸ್ಥಾಪಕರ ಮತ್ತು ಜಿಲ್ಲಾ ವ್ಯವಸ್ಥಾಪಕರ ಪ್ರಗತಿ ಪರಿಶೀಲನಾ ಸಭೆಯಲ್ಲಿ ವಿವರವಾಗಿ ಚರ್ಚಿಸಿ ಸೂಚನೆಗಳನ್ನು ನೀಡಲಾಗಿರುತ್ತದೆ.

2.....

(51)



ಅದ್ದರಿಂದ ನಿಗಮದ ಎಲ್ಲಾ ಜಿಲ್ಲಾ ವ್ಯವಸ್ಥಾಪಕರು ಹಾಗೂ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು ಈ ಕುರಿತು ಅಗತ್ಯ ಗಮನಹರಿಸಿ ಇನ್ನು ಮುಂದೆ ನಡೆಯುವ ಯಾವುದೇ ಆಯ್ಕೆ ಸಮಿತಿ ಸಭೆಗೆ ಉಲ್ಲೇಖ(2)ರಲ್ಲಿನ ಸರ್ಕಾರದ ತಿದ್ದುಪಡಿ ಆದೇಶದಂತೆ ಕ್ರಮವಹಿಸತಕ್ಕದ್ದು. ಹಾಗೂ ಸದರಿ ಮಾನ್ಯ ಶಾಸಕರು, ವಿಧಾನ ಪರಿಷತ್ ರವರು ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಸಭಾ ಕ್ಷೇತ್ರಗಳಲ್ಲಿ ಕಟ್ಟುನಿಟ್ಟಾಗಿ ಮಾನ್ಯರನ್ನು ಸೂಕ್ತ ಸಭೆ ಸೂಚನಾ ಪತ್ರದೊಂದಿಗೆ ಸಮಿತಿ ಸಭೆಗೆ ಆಹ್ವಾನಿಸಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ನಡೆಸತಕ್ಕದ್ದು ಹಾಗೂ ಸಂಬಂಧಿಸಿದ ಸಮಿತಿ ಸಭೆ ನಡವಳಿಗಳಲ್ಲಿ ಹಾಗೂ ಹಾಜರಾತಿ ವಹಿಯಲ್ಲಿ ಮಾನ್ಯರ ಸಹಿ ಪಡೆಯತಕ್ಕದ್ದು.

ಸದರಿ ಫಲಾನುಭವಿಗಳ ಆಯ್ಕೆ ಸಮಿತಿ ಸಭೆಯನ್ನು ಸರ್ಕಾರ ನಿಗದಿಪಡಿಸಿದ ಶಿಷ್ಟಾಚಾರದಂತೆ ನಡೆಸತಕ್ಕದ್ದು. 2018-19ನೇ ಹಾಗೂ ಅದರ ಹಿಂದಿನ ಸಾಲಿನ ಆಯ್ಕೆ ಪ್ರಕ್ರಿಯೆ ಇನ್ನೂ ಪೂರ್ಣಗೊಳ್ಳದ ವಿಧಾನಸಭಾ ಕ್ಷೇತ್ರಗಳಲ್ಲಿ ಈ ಮೇಲೆ ತಿಳಿಸಿರುವ ಸೂಚನೆಗಳಂತೆ ಕ್ರಮವಹಿಸತಕ್ಕದ್ದು. ಈ ರೀತಿ ಕ್ರಮವಹಿಸದ ಜಿಲ್ಲಾ ವ್ಯವಸ್ಥಾಪಕರು/ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕರ್ತವ್ಯಲೋಪದ ಆರೋಪದ ಮೇಲೆ ಶಿಸ್ತಿನ ಕ್ರಮ ಜರುಗಿಸಲಾಗುವುದು.

ವ್ಯವಸ್ಥಾಪಕ ನಿರ್ದೇಶಕರು

ಪ್ರತಿಯನ್ನು:

1. ಜಿಲ್ಲಾ ವ್ಯವಸ್ಥಾಪಕರು, ಡಾ:.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ,.......................................ಜಿಲ್ಲೆ ಇವರ ಸೂಕ್ತ ಮಾಹಿತಿಗಾಗಿ
2. ಉಪ ಪ್ರಧಾನ ವ್ಯವಸ್ಥಾಪಕರು, ಡಾ:.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, (ಬೆಂಗಳೂರು/ ಮೈಸೂರು/ಬೆಳಗಾವಿ/ಕಲಬುರಗಿ) ಇವರ ಮಾಹಿತಿಗಾಗಿ.
3. ಕಛೇರಿ ಪ್ರತಿ

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗೆ ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರುಗಳನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ:- ಸರ್ಕಾರದ ಆದೇಶ ಸಂಖ್ಯೆ: ಸಕಇ 221 ಬಿಸಿಎ 2008, ದಿ: 02-01-2009..

***

ಪ್ರಸ್ತಾವನೆ:-

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 02-01-2009 ರ ಸರ್ಕಾರದ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ॥ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಡಗಳ ಅಭಿವೃದ್ಧಿ ನಿಗಮ, ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಂದ ಅನುಷ್ಠಾನಗೊಳಿಸುವ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ವಿಧಾನಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ಆಯಾ ಲೋಕಸಭಾ ಕ್ಷೇತ್ರದ ಸದಸ್ಯರು | ಸದಸ್ಯರು |
| 3 | ಆಯಾ ರಾಜ್ಯ ಸಭಾ ಕ್ಷೇತ್ರದಲ್ಲಿ ಖಾಯಂ ಆಗಿ ವಾಸಿಸುವಂತಹ ರಾಜ್ಯ ಸಭಾ ಸದಸ್ಯರು | ಸದಸ್ಯರು |
| 4 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 5 | ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ | ಸದಸ್ಯರು |
| 7 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ. | ಸದಸ್ಯರು |
| 8 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುತ್‌ಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 9 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 10 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 11 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 12 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿ ಇಲಾಖೆ. | ಸದಸ್ಯರು |
| 13 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 14 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 15 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | ಸದಸ್ಯ ಕಾರ್ಯದರ್ಶಿ. |

ಮೇಲೆ ವಿವರಿಸಿರುವಂತೆ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಿಂದ ಅನುಷ್ಠಾನಗೊಳಿಸುವ ಯೋಜನೆಗಳಡಿ ಫಲಾನುಭವಿಗಳ ಆಯ್ಕೆಯ ಕುರಿತಂತೆ ರಚಿಸಲಾದ ಸಮಿತಿಯ ಬಗ್ಗೆ ಪುನ: ಪರಿಶೀಲಿಸಲಾಗಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಮಾರ್ಪಡು ಆದೇಶ.

ಸರ್ಕಾರಿ ಆದೇಶ ಸಂಖ್ಯೆ:ಸಕಇ 162 ಎಸ್‌ಡಿಸಿ 2015 (ಭಾ),
ಬೆಂಗಳೂರು, ದಿನಾಂಕ:04/07/2016.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರುಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ

ಮು.ತಿ.ನೋ

(29)



ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ಪುನ ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ವಿಧಾನಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಉಪಾಧ್ಯಕ್ಷರು |
| 3 | ಆಯಾ ಲೋಕಸಭಾ ಕ್ಷೇತ್ರದ ಸದಸ್ಯರು | ಸದಸ್ಯರು |
| 4 | ಆಯಾ ರಾಜ್ಯ ಸಭಾ ಕ್ಷೇತ್ರದಲ್ಲಿ ಖಾಯಂ ಆಗಿ ವಾಸಿಸುವಂತಹ ರಾಜ್ಯ ಸಭಾ ಸದಸ್ಯರು | ಸದಸ್ಯರು |
| 5 | ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ | ಸದಸ್ಯರು |
| 7 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ. | ಸದಸ್ಯರು |
| 8 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುತ್ಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 9 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 10 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 11 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 12 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿಕೆಇಲಾಖೆ. | ಸದಸ್ಯರು |
| 13 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 14 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 15 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | ಸದಸ್ಯ ಕಾರ್ಯದರ್ಶಿ, |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಬಿ.ಎಸ್.ಸುಮತಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಗಳು:-

1. ಮಹಾಲೇಖಪಾಲರು (ಎ & ಇ ಲೆಕ್ಕ ಪರಿಶೋಧನೆ-1, 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಎಲ್ಲಾ ಸದಸ್ಯರುಗಳಿಗೆ.
4. ಅಧ್ಯಕ್ಷರು, ವಿದ್ಯುಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ), ಬೆಂಗಳೂರು.
5. ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು.
6. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
7. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಡಾ॥ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
11. ವ್ಯವಸ್ಥಾಪಕರ ನಿರ್ದೇಶಕರು, ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಮಾಹಿತಿಗಾಗಿ :-

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

38

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗೆ ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರುಗಳನ್ನು ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:-** ಸರ್ಕಾರದ ಆದೇಶ ಸಂಖ್ಯೆ: ಸಕಇ 221 ಬಿಸಿಎ 2008, ದಿ: 02-01-2009.

***

**ಪ್ರಸ್ತಾವನೆ:-**

ಮೇಲೆ ಓದಲಾದ ದಿನಾಂಕ: 02-01-2009 ರ ಸರ್ಕಾರದ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಇವರುಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ವಿಧಾನಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 3 | ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ | ಸದಸ್ಯರು |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ | ಸದಸ್ಯರು |
| 5 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ. | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುತ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 7 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 8 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 9 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 10 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿ ಇಲಾಖೆ. | ಸದಸ್ಯರು |
| 11 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 12 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 13 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ,<br>ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು.<br>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | ಸದಸ್ಯ ಕಾರ್ಯದರ್ಶಿ. |

ಸದರಿ ಆಯ್ಕೆ ಸಮಿತಿಗೆ ಆಯಾ ಲೋಕಸಭಾ ಕ್ಷೇತ್ರವನ್ನು ಪ್ರತಿನಿಧಿಸುವ ಲೋಕಸಭಾ ಸದಸ್ಯರು ಹಾಗೂ ರಾಜ್ಯ ಸಭಾ ಸದಸ್ಯರನ್ನು ಕೂಡ ಸದಸ್ಯರನ್ನಾಗಿ ನೇಮಕ ಮಾಡುವುದು ಸೂಕ್ತವಾಗಿರುತ್ತದೆ ಎಂದು ಪರಿಗಣಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 162 ಎಸ್‌ಡಿಸಿ 2015,**
**ಬೆಂಗಳೂರು, ದಿನಾಂಕ:09/09/2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರುಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ

ಮು.ತಿ.ನೋ

ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ಪುನರ್ ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ವಿಧಾನಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ಆಯಾ ಲೋಕಸಭಾ ಕ್ಷೇತ್ರದ ಸದಸ್ಯರು | ಸದಸ್ಯರು |
| 3 | ಆಯಾ ರಾಜ್ಯ ಸಭಾ ಕ್ಷೇತ್ರದಲ್ಲಿ ಖಾಯಂ ಆಗಿ ವಾಸಿಸುವಂತಹ ರಾಜ್ಯ ಸಭಾ ಸದಸ್ಯರು | ಸದಸ್ಯರು |
| 4 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 5 | ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ | ಸದಸ್ಯರು |
| 7 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ. | ಸದಸ್ಯರು |
| 8 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುತ್‌ಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 9 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 10 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 11 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 12 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿ ಇಲಾಖೆ. | ಸದಸ್ಯರು |
| 13 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 14 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 15 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | ಸದಸ್ಯ ಕಾರ್ಯದರ್ಶಿ. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

09/09
(ವಿ ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ.

<u>ಇವರಿಗೆ:-</u>

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

<u>ಪ್ರತಿಗಳು:-</u>

1. ಮಹಾಲೇಖಪಾಲರು (ಎ & ಇ ಲೆಕ್ಕ ಪರಿಶೋಧನೆ-1, 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಎಲ್ಲಾ ಸದಸ್ಯರುಗಳಿಗೆ.
4. ಅಧ್ಯಕ್ಷರು, ವಿದ್ಯುಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ), ಬೆಂಗಳೂರು.
5. ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು.
6. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
7. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
11. ವ್ಯವಸ್ಥಾಪಕರ ನಿರ್ದೇಶಕರು, ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಮಾಹಿತಿಗಾಗಿ :-</u>

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನಸೌಧ. ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ ಮತ್ತು ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ. ಬೆಂಗಳೂರು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಮಾಜ ಕಲ್ಯಾಣ ಇಲಾಖೆಯಲ್ಲಿ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗಳಿಗೆ "ಶಾಸಕರನ್ನು ಅಧ್ಯಕ್ಷರನ್ನಾಗಿ" ನೇಮಕ ಮಾಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಸಕಇ 22 ಎಸ್‌ಡಿಸಿ 2000, ದಿ:14-10-2003.
2. ಸರ್ಕಾರದ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಎಲ್ 61 ಎಸ್‌ಎಲ್‌ಪಿ 91, ದಿ:19-05-1992.
3. ಸರ್ಕಾರದ ಆದೇಶ ಸಂಖ್ಯೆ:ಸಕಇ 18 ಎಸ್‌ಡಿಸಿ 2001, ದಿ:12-03-2001.
4. ಟಿಪ್ಪಣಿ ಸಂಖ್ಯೆ:ಸಿಎಂ/4538/ಎಸ್‌ಎಪಿ/2008, ದಿ:25-11-2008.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಗಳು ಜಾರಿಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳನ್ನು ಹಾಗೂ ಜಮೀನುಗಳನ್ನು ಗುರುತಿಸುವ ಸಲುವಾಗಿ ಸಮಿತಿಯನ್ನು ಈ ಕೆಳಕಂಡಂತೆ ಪುನರ್‌ರಚಿಸಲಾಗಿದೆ.

| | | |
|---|---|---|
| 1 | ವಿಧಾನ ಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 3 | ತಾಲ್ಲೂಕು ಕಾರ್ಯನಿರ್ವಾಹಕಣಾಧಿಕಾರಿ | ಸದಸ್ಯರು |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ಪಂಚಾಯತ್ | ಸದಸ್ಯರು |
| 5 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 7 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 8 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 9 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |

→

10
28/01/09

ಶ್ರೀ



| | | |
|---|---|---|
| | | ಸದಸ್ಯರು |
| 10 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿಕಾ ಇಲಾಖೆ | ಸದಸ್ಯರು |
| 11 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 12 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು. | ಸದಸ್ಯ |
| 13 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | ಕಾರ್ಯದರ್ಶಿ |

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ಈ ಕೆಳಕಂಡಂತೆ ಸಮಿತಿ ರಚಿಸಿದೆ.

| | | |
|---|---|---|
| 1 | ಸಮಾಜ ಕಲ್ಯಾಣ ಸಚಿವರು | ಅಧ್ಯಕ್ಷರು |
| 2 | ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಮತ್ತು ಕಾರ್ಮಿಕ ಇಲಾಖೆ | ಸದಸ್ಯರು |
| 3 | ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ | ಸದಸ್ಯರು |
| 4 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ. | ಸದಸ್ಯ ಕಾರ್ಯದರ್ಶಿ |

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ಈ ಕೆಳಕಂಡಂತೆ ಸಮಿತಿ ರಚಿಸಿದೆ.

| | | |
|---|---|---|
| 1 | ಸಮಾಜ ಕಲ್ಯಾಣ ಸಚಿವರು | ಅಧ್ಯಕ್ಷರು |
| 2 | ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಮತ್ತು ಕಾರ್ಮಿಕ ಇಲಾಖೆ | ಸದಸ್ಯರು |
| 3 | ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ | ಸದಸ್ಯರು |
| 4 | ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ. | ಸದಸ್ಯರು |
| 5 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ. | ಸದಸ್ಯ ಕಾರ್ಯದರ್ಶಿ |

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ನಮ್ಮ ಮುಖ್ಯಮಂತ್ರಿಯವರ ಟಿಪ್ಪಣಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗಳಿಗೆ ಶಾಸಕರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸೂಚಿಸಿದ್ದು, ಅದರಂತೆಯೇ ಈ ಕೆಳಕಂಡ ನಿಗಮಗಳಲ್ಲಿ ಕ್ಷೇತ್ರವಾರು,

→

ತಾಲ್ಲೂಕುವಾರು, ಜಿಲ್ಲಾವಾರು ಸಮಿತಿಗಳನ್ನು ನೇಮಕ ಮಾಡಿ ಸಮಿತಿಗಳಿಗೆ ಶಾಸಕರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಬೇಕಿರುತ್ತದೆ. ಕಾರಣ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 221 ಬಿಸಿಎ 2008,**
**ಬೆಂಗಳೂರು, ದಿನಾಂಕ:02-01-2009.**

ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ಪುನರ್‌ರಚಿಸಲಾಗಿದೆ.

| | | |
|---|---|---|
| 1 | ವಿಧಾನ ಸಭಾ ಕ್ಷೇತ್ರದ ಶಾಸಕರು. | ಅಧ್ಯಕ್ಷರು |
| 2 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 3 | ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿ | ಸದಸ್ಯರು |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ಪಂಚಾಯತ್ | ಸದಸ್ಯರು |
| 5 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 7 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 8 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 9 | ತಾಲ್ಲೂಕಿನ ಸಹಾಯಕ ನಿರ್ದೇಶಕರು,ಕೃಷಿ ಇಲಾಖೆ | ಸದಸ್ಯರು |
| 10 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿಕಾ ಇಲಾಖೆ | ಸದಸ್ಯರು |
| 11 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 12 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 13 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ. ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ | ಸದಸ್ಯ ಕಾರ್ಯದರ್ಶಿ |

| | |
|---|---|
| ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | |

ಈ ಸಮಿತಿಯು ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸುವುದು.

1. ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡುವುದು.
2. ಈ ಕಾರ್ಯಕ್ರಮವು ಯಶಸ್ವಿಯಾಗಿ ಕಾರ್ಯಗತವಾಗಲು ಸಲಹೆ ನೀಡುವುದು.
3. ಯೋಜನೆಯಲ್ಲಿ ಲೋಪದೋಷಗಳು ಕಂಡುಬಂದರೆ ಅಂಶಗಳನ್ನು ನಿವಾರಿಸಲು ಸಲಹೆ ನೀಡುವುದು.
4. ಗುಣಮಟ್ಟದ ಸಲಕರಣೆಗಳನ್ನು ಅಳವಡಿಸಲು ಸಲಹೆ ನೀಡುವುದು.
5. ಫಲಾನುಭವಿಗಳು ಇದರ ಪೂರ್ಣ ಲಾಭ ಪಡೆಯಲು ಅವರಿಗೆ ಅಗತ್ಯ ಪ್ರೇರೇಪಣೆ ನೀಡುವುದು.
6. ಫಲಾನುಭವಿಗಳಿಗೆ ಯೋಜನೆಯ ಪೂರ್ಣಲಾಭ ಪಡೆಯಲು ಬೇರೆ ಇಲಾಖೆಯಿಂದ ನೆರವು ಅಥವಾ ಸಹಾಯ ಅಗತ್ಯವಾದಲ್ಲಿ ಅಂತಹ ಸಹಾಯ ಮತ್ತು ನೆರವನ್ನು ಸಂಬಂಧಿಸಿದ ಇಲಾಖೆಗಳಿಂದ ಒದಗಿಸಿಕೊಡಲು ಸಲಹೆ ನೀಡುವುದು.
7. ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದ ರೈತರ ಬಗ್ಗೆ ವಿವರಗಳನ್ನು ಪಟ್ಟಿ ಮಾಡಿ ನಿರ್ವಹಿಸುವುದು.
8. ಈ ಸಮಿತಿಯು ಸಲಹೆಗಳನ್ನು ಘಟಕದ ಆರ್ಥಿಕ ನೀತಿ ಒಳಪಟ್ಟು ಅಧಿಕಾರಿಗಳು ಪರಿಶೀಲಿಸಿ ಪರಿಪಾಲನೆ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಸುಬ್ಬಯ್ಯ) 21/09

ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಗಳು:

1. ಮಹಾಲೇಖಪಾಲಕರು (ಲೆಕ್ಕಪತ್ರ 1 & 2) ಕರ್ನಾಟಕ, ಬೆಂಗಳೂರು.
2. ಅಪರ ಮುಖ್ಯಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಎಲ್ಲಾ ಸದಸ್ಯರುಗಳಿಗೆ.

ಕರ್ನಾಟಕ ಸರ್ಕಾರ

ಸಂಖ್ಯೆ:ಸಕಇ 253 ಬಿಸಿಎ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು,ದಿನಾಂಕ:09-11-2009.

## ಸೇರ್ಪಡೆ ಆದೇಶ

ಸರ್ಕಾರದ ಆದೇಶ ಸಂಖ್ಯೆ:ಸಕಇ 221 ಬಿಸಿಎ 2009 ದಿನಾಂಕ:02-01-2009 ಆದೇಶಕ್ಕೆ ವಿಧಾನ ಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಗೆ ಈ ಕೆಳಕಂಡ ಅಧಿಕಾರಿಗಳನ್ನು ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯಲ್ಲಿ ಸದಸ್ಯರನ್ನಾಗಿ ಸೇರ್ಪಡೆಗೊಳಿಸಲಾಗಿದೆ.

1) ಲೀಡ್ ಬ್ಯಾಂಕ್ ಆಫೀಸರ್/ಪ್ರತಿನಿಧಿ
2) ಸಹಕಾರ ಸಂಘಗಳ ಸಹಾಯಕ ನಿಬಂಧಕರು
3) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು.

ಉಳಿದಂತೆ ದಿನಾಂಕ:02-01-2009ರ ಸರ್ಕಾರಿ ಆದೇಶದಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾಟ)
ಸರ್ಕಾರದ ಅಧೀನ ಕಾರ್ಯದರ್ಶಿ-III
ಸಮಾಜ ಕಲ್ಯಾಣ ಇಲಾಖೆ.

09/11

G.M (ನಿಗಮ) D.M 10/11 11.XI.2009

ಇವರಿಗೆ:

(1) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು.
(2) ಮಹಾಲೇಖಪಾಲರು (ಲೆಕ್ಕಪತ್ರ 1&2) ಕರ್ನಾಟಕ, ಬೆಂಗಳೂರು.
(3) ಅಪರ ಮುಖ್ಯಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.

4. ಅಧ್ಯಕ್ಷರು, ವಿದ್ಯುಚ್ಛಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ), ಬೆಂಗಳೂರು.
5. ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು.
5 ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಇಲಾಖೆ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.

ಮಾಹಿತಿಗಾಗಿ:

1. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.
2. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.
3. ಉಪ ಕಾರ್ಯದರ್ಶಿ 3ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.
4. ಅಧೀನ ಕಾರ್ಯದರ್ಶಿ-1, 2 ಮತ್ತು 3ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.

ವಿಕಾಸಸೌಧ,
ಬೆಂಗಳೂರು, ದಿನಾಂಕ 27.12.2010

## ತಿದ್ದುಪಡಿ ಆದೇಶ

ವಿಷಯ: ವಿಧಾನಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಫಲಾನುಭವಿಗಳ ಆಯ್ಕೆಗೆ ರಚಿಸಲಾದ ಆಯ್ಕೆ ಸಮಿತಿಗೆ ಮಾನ್ಯ ವಿಧಾನಸಭಾ ಸದಸ್ಯರು ಇಲ್ಲದ ಸಮಯದಲ್ಲಿ "ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳನ್ನು' ಸಮಿತಿಯ ಅಧ್ಯಕ್ಷರನ್ನಾಗಿ ನೇಮಕ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂ: ಸಕಇ 221 ಬಿಸಿಎ 2008, ದಿ: 02.01.2009.

- - - - - -

ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಮತ್ತು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವುಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಮಾನ್ಯ ವಿಧಾನಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ಸರ್ಕಾರದ ಆದೇಶ ಸಂ: ಸಕಇ 221 ಬಿಸಿಎ 2008, ದಿನಾಂಕ:02.01.2009 ಮತ್ತು 08.5.2009ರಲ್ಲಿ ರಚಿಸಲಾಗಿದೆ.

ವಿವಿಧ ಕಾರಣಗಳಿಂದ ಕೆಲವೊಂದು ವಿಧಾನಸಭಾ ಕ್ಷೇತ್ರದಲ್ಲಿ ಮಾನ್ಯ ವಿಧಾನಸಭಾ ಸದಸ್ಯರ ಸ್ಥಾನ ಖಾಲಿ ಇದ್ದು, ವಿವಿಧ ಯೋಜನೆಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಸಾಧ್ಯವಾಗುತ್ತಿಲ್ಲ. ಇಂತಹ ಸಮಯದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳನ್ನು ಆಯ್ಕೆ ಸಮಿತಿಯ ಅಧ್ಯಕ್ಷರಾಗಿ ಫಲಾನುಭವಿಗಳನ್ನು ಆಯ್ಕೆ ಮಾಡಲು ನೇಮಕ ಮಾಡಲಾಗಿದೆ. ಹಾಗೂ ಸಮಿತಿಯಲ್ಲಿರುವ ಇತರ ಸದಸ್ಯರು ಹಾಲಿ ಇರುವಂತೆ ಮುಂದುವರೆಯುವರು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಬಾದಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು. (ಎ ಮತ್ತು ಇ ಲೆಕ್ಕ ಪರಿಶೋಧನೆ 1-2) ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
6) ಮಾನ್ಯ ಸಮಾಜ ಕಲ್ಯಾಣ ಹಾಗೂ ಬಂಧೀಖಾನೆ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು.
8) ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ-(ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಮುಖಾಂತರ)
9) ಶಾಖಾ ರಕ್ಷಾಕಡತ/ ಹೆಚ್ಚುವರಿ ಪ್ರತಿಗಳು.